ಹೇಮಾವತಿ ನಾಲಾ ಯೋಜನೆಯ ಕೆಲಸ ಸ್ಥಗಿತ.

223 - ಶ್ರೀ ಎಸ್. ಶಿವಣ್ಣ (ತುಮಕೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುಮಕೂರು ಜಿಲ್ಲೆಯಲ್ಲಿ ಹೇಮಾವತಿ ನಾಲಾ ಯೋಜನೆ ಕಾಮಗಾರಿ ಸ್ಥಗಿತವಾಗಿರುವುದಕ್ಕೆ ಕಾರಣವೇನು;*

ಆ) *ಈ ಬಗ್ಗೆ ತುಮಕೂರು ಜಿಲ್ಲೆಗೆ ಹೇಮಾವತಿ ನೀರನ್ನು ಯಾವಾಗ ಬಿಡುಗಡೆ ಮಾಡಲಾಗುವುದು;*

ಇ) *ತುಮಕೂರು ಜಿಲ್ಲೆಯಲ್ಲಿ ಹೇಮಾವತಿ ನಾಲಾ ಕಾಮಗಾರಿಯನ್ನು ಇನ್ನು ಎಷ್ಟು ತಿಂಗಳೊಳಗೆ ಪೂರ್ಣಗೊಳಿಸಲಾಗುವುದು?*

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಟೆಂಡರ್ ಆಧಾರದ ಮೇಲೆ, ನಿಯಮಾನುಸಾರ ಕೈಗೆತ್ತಿಕೊಂಡಿರುವ ತುಂಡು ಗುತ್ತಿಗೆ ಹಾಗೂ ಇಲಾಖಾವತಿ ಆಧಾರದ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ನಿಯಮ ಬಾಹಿರವಾದ ಕಾಮಗಾರಿಗಳನ್ನು ಮಾತ್ರ ಸ್ಥಗಿತಗೊಳಿಸಲಾಗಿದೆ.

ಆ) ತುಮಕೂರು ಜಿಲ್ಲೆಗೆ 94-95ರಿಂದ ಮೊದಲು ಗೊಂಡು 97-98ರ ವರೆಗೆ ಹಂತ ಹಂತವಾಗಿ ನೀರಾವರಿ ಸಾಮರ್ಥ್ಯವನ್ನು ಕಲ್ಪಿಸುವ ಕಾರ್ಯಕ್ರಮವಿದೆ.

ತುಮಕೂರು ಜಿಲ್ಲೆಯ ಏತ ನೀರಾವರಿ ಯೋಜನೆ

224 - ಶ್ರೀ ಎಸ್. ಶಿವಣ್ಣ (ತುಮಕೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. *ತುಮಕೂರು ಜಿಲ್ಲೆಯ ನಾಲಾ ಪ್ರದೇಶದ ಕೆರೆಗಳಿಗೆ ಹೇಮಾವತಿ ನೀರನ್ನು ಏತನೀರಾವರಿ ಮೂಲಕ ಒದಗಿಸಲು ಸರ್ಕಾರ ಯೋಚಿಸಿದೆಯೇ;*

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಗೋವಾ ಸ್ವಾತಂತ್ಯ ಹೋರಾಟಗಾರರಿಗೆ ನೀಡುತ್ತಿರುವ ಗೌರವ ಧನ

226 - ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗ ದಯವಿಟ್ಟು ಉತ್ತರಿಸುವರೆ?

ಅ) *1955ರ ಗೋವಾ ಸ್ವಾತಂತ್ಯ ಚಳುವಳಿಯಲ್ಲಿ ಕರ್ನಾಟಕದಿಂದ ಭಾಗವಹಿಸಿದ ಎಷ್ಟು ಮಂದಿ ಗೋವಾ ಸ್ವಾತಂತ್ಯ ಹೋರಾಟಗಾರರಿಗೆ ರಾಜ್ಯ ಸರ್ಕಾರವು ಗೌರವಧನ ನೀಡುತ್ತಿದೆ, ಜಿಲ್ಲಾವಾರು ಸಂಖ್ಯೆ ನೀಡುವುದು;*